ಮೇಕೆದಾಟು ತಂಗುದಾಣವನ್ನು ಅಭಿವೃದ್ಧಿಗೊಳಿಸುವ ಕುರಿತು

೩೯೭. ಶ್ರೀ ಪಿ. ಜಿ. ಆರ್. ಸಿಂಧ್ಯ (ಕನಕಪುರ).— ಮಾನ್ಯ ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವಾ ಇಲಾಖಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಮೇಕೆದಾಟು ಒಂದು ಪ್ರವಾಸಿ ಸ್ಥಳವೆಂದು ಸರ್ಕಾರ ಘೋಷಿಸಿದೆಯೇ ?

ಆ) ಹಾಗಿದ್ದಲ್ಲಿ, ಅಲ್ಲಿ ಪ್ರವಾಸಿಗರಿಗೆ ಒದಗಿಸಿರುವ ಸೌಲಭ್ಯಗಳೇನು ?

ಶ್ರೀ ಎಂ. ವೀರಪ್ಪ ಮೊಯಿಲಿ (ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನಸೇವಾ ಇಲಾಖಾ ಸಚಿವರು).—

ಅ) ಹೌದು.

ಆ) ಈವರೆವಿಗೂ ಅಲ್ಲಿ ಪ್ರವಾಸಿ ಸೌಲಭ್ಯಗಳಿರಲಿಲ್ಲ. ಈಗ ಪ್ರವಾಸೋದ್ಯಮ ಇಲಾಖೆಯು ತಾಲ್ಲೂಕು ಅಭಿವೃದ್ಧಿ ಮಂಡಲಿಯ ನಾಲ್ಕು ಕೊಠಡಿಗಳುಳ್ಳ ಮುಸಾಫಿರ್‌ಖಾನಾ ಕಟ್ಟಡವನ್ನು ತೆಗೆದುಕೊಂಡು ಅದನ್ನು ನವೀಕರಿಸಲು ಕ್ರಮ ಕೈಗೊಂಡಿದ್ದು ಕೆಲಸವು ಮುಕ್ತಾಯದ ಹಂತದಲ್ಲಿದೆ. ಅಲ್ಲದೆ ಅಡುಗೆ ಕೋಣೆ ಮತ್ತು ಊಟದ ಸಭಾಂಗಣವನ್ನು ಕಟ್ಟಲು ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿದೆ.

ಶಹಾಪುರ ತಾಲ್ಲೂಕಿನ ಮುನ್ಸೀಫ್ ಮ್ಯಾಜಿಸ್ಟ್ರೇಟರ ಕಛೇರಿ ಕಟ್ಟಡದ ಬಗ್ಗೆ

೧೭೨. ಶ್ರೀ ಶಿವಶೇಖರಗೌಡ (ಶಹಾಪುರ).— ಮಾನ್ಯ ಕಾನೂನು, ಸಂಸದೀಯ ವ್ಯವಹಾರ, ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕಲ್ಬುರ್ಗಿ ಜಿಲ್ಲೆಯ ಶಹಾಪುರ ತಾಲ್ಲೂಕಿನ ಮುನ್ಸೀಫ್ ಮ್ಯಾಜಿಸ್ಟ್ರೇಟರ ಕಛೇರಿಕಟ್ಟಡದ ಸಲುವಾಗಿ ಎಷ್ಟು ಎಕರೆ ಜಮೀನನ್ನು ವಶಪಡಿಸಿಕೊಳ್ಳಲಾಗಿದೆ ?

ಆ) ಹಾಗಿದ್ದಲ್ಲಿ, ಜಮೀನಿನ ಮೂಲೀಕರಿಗೆ ಪರಿಹಾರ ಧನ ಕೊಡಲಾಗಿದೆಯೇ ?

ಇ) ಹಾಗಿದ್ದಲ್ಲಿ ಮುನ್ಸೀಫ್ ಮ್ಯಾಜಿಸ್ಟ್ರೇಟರ ಕಛೇರಿ ಕಟ್ಟಡ ನಿರ್ಮಾಣ ಕಾರ್ಯವನ್ನು ಎಂದಿನಿಂದ ಪ್ರಾರಂಭಿಸಲಾಗುವುದು ?

ಶ್ರೀ ಎಂ. ವೀರಪ್ಪ ಮೊಯಿಲಿ (ವಾರ್ತಾ, ಪ್ರವಾಸೋದ್ಯಮ ಕಾನೂನು ಸಂಸದೀಯ ವ್ಯವಹಾರ ಮತ್ತು ಯುವಜನ ಸೇವಾ ಸಚಿವರು)

ಅ) ಶಹಾಪುರ ತಾಲ್ಲೂಕಿನ ಹಳ್ಳಿಸಾಗರ ಗ್ರಾಮದಲ್ಲಿನ ಸರ್ವೆ ನಂ. ೩೮೬ರಲ್ಲಿನ ೬ ಎಕರೆ ಜಮೀನು.

ಆ) ಇಲ್ಲ.

ಇ) ನಕ್ಷೆ ಮತ್ತು ಅಂದಾಜುಗಳಿಗೆ ಮಂಜೂರಾತಿ ನೀಡಿದ ತದನಂತರ.

ಬೈಲಹೊಂಗಲದಲ್ಲಿರುವ ವೀರರಾಣಿ ಕಿತ್ತೂರ ಚೆನ್ನಮ್ಮನ ಸಮಾಧಿಗೆ ಹೊನಲು ಬೆಳಕು ಅಳವಡಿಸುವ ಕುರಿತು

೩೬೮. ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ).— ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಯೋಜನಾ, ವಾರ್ತಾ, ಪ್ರವಾಸೋದ್ಯಮ, ಯುವಜನ ಸೇವೆ, ವಾಣಿಜ್ಯ, ಮತ್ತು ಕೈಗಾರಿಕಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೈಲಹೊಂಗಲ ನಗರದಲ್ಲಿ ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಬೈಲಹೊಂಗಲದಲ್ಲಿರುವ ವೀರರಾಣಿ ಕಿತ್ತೂರ ಚೆನ್ನಮ್ಮನ ಸಮಾಧಿಗೆ ಹೊನಲು ಬೆಳಕಿನ ವ್ಯವಸ್ಥೆ ಅಳವಡಿಸುವ ಬಗ್ಗೆ ದಿ. ೨೪-೩-೯೯ರಂದು ಸರಕಾರದ ಆಜ್ಞೆ ಹೊರಡಿಸಲಾಗಿದೆಯೇ ?

ಆ) ಹಾಗಿದ್ದಲ್ಲಿ, ಈ ಕಾಮಗಾರಿಗೆ ಈವರೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ, ಮತ್ತು ಈಗ ಈ ಕೆಲಸ ಯಾವ ಹಂತದಲ್ಲಿದೆ ?

ಶ್ರೀ ಎಂ. ವೀರಪ್ಪ ಮೊಯಿಲಿ (ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವಾ ಇಲಾಖಾ ಸಚಿವರು).—

ಅ) ಹೌದು. ದಿನಾಂಕ. ೨೪-೨-೮೯ರಂದು ಆದೇಶವನ್ನು ಹೊರಡಿಸಿದೆ.

ಆ) ಈವರೆವಿಗೂ ಕೆಲಸವನ್ನು ಪ್ರಾರಂಭಿಸಿಲ್ಲ.

ಹುಬ್ಬಳ್ಳಿ – ಧಾರವಾಡ ರಾಷ್ಟ್ರೀಯ ಹೆದ್ದಾರಿಯಲ್ಲಿ ಬೈಪಾಸ್ ರಸ್ತೆ ಮಾಡುವ ಬಗ್ಗೆ

೩೬೪. ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ).—ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಹುಬ್ಬಳ್ಳಿ—ಧಾರವಾಡ ನಡುವೆ ಹಾಯ್ದು ಹೋಗುವ ರಾಷ್ಟ್ರೀಯ ಹೆದ್ದಾರಿ ನಂ. ೪ರಲ್ಲಿ ಸಂಚಾರ ಹೆಚ್ಚಾಗಿದ್ದು, ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವ ವಿಚಾರ ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಈ ರಸ್ತೆಗೆ ಬೈಪಾಸ್ ರಸ್ತೆ ಮಾಡುವ ಕೆಲಸ ಯಾವ ಹಂತದಲ್ಲಿದೆ ?

ಶ್ರೀ ಜಿ. ಪುಟ್ಟಸ್ವಾಮಿಗೌಡ, (ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಯವರು).—

ಅ) ಬಂದಿದೆ.

ಆ) ಹುಬ್ಬಳ್ಳಿ—ಧಾರವಾಡ ನಗರಗಳಿಗೆ ೩೦ ಕಿ.ಮೀ. ಉದ್ದದ ಒಂದು ಸಂಯುಕ್ತ ಬೈಪಾಸ್ ರಸ್ತೆಯನ್ನು ೬೬೦ ಲಕ್ಷ ರೂಗಳ ಅಂದಾಜಿನಲ್ಲಿ ನಿರ್ಮಿಸಲು ಕೇಂದ್ರ ಸರ್ಕಾರ ಒಂದು ಯೋಜನೆಯನ್ನು ಹಾಕಿದೆ. ಈ ಬೈಪಾಸ್ ರಸ್ತೆಯನ್ನು ಎರಡು ಹಂತಗಳಲ್ಲಿ ಕೈಗೊಳ್ಳಲು ಉದ್ದೇಶಿಸಿದೆ. ಮೊದಲನೇ ಹಂತದ ೧೭ ಕಿ.ಮೀ. ಉದ್ದದ ೨೯೦ ಲಕ್ಷ ರೂಗಳ ಅಂದಾಜು ಮಂಜೂರಾಗಿದ್ದು, ಈಗ ಜಲ್ಲಿ ರಸ್ತೆ ನಿರ್ಮಿಸುವ ಹಂತದಲ್ಲಿದೆ. ಉಳಿದ ೧೩ ಕಿ. ಮೀ. ರಸ್ತೆಯ ತಾಂತ್ರಿಕ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗಿದೆ.

ಬೆಳಗಾವಿ ಜಿಲ್ಲೆಯ ಶ್ರೀ ಸೋಗಲ ಕ್ಷೇತ್ರದಲ್ಲಿ ಶೌಚಾಲಯ ನಿರ್ಮಿಸುವ ಬಗ್ಗೆ

೩೬೭. ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) .— ಮಾನ್ಯ ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವಾ ಇಲಾಖೆ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಳಗಾವಿ ಜಿಲ್ಲೆಯ ಶ್ರೀ ಕ್ಷೇತ್ರ ಸೋಗಲದಲ್ಲಿ ಪ್ರವಾಸಿಗರ ಅನುಕೂಲತೆಗಾಗಿ ಪ್ರವಾಸೋದ್ಯಮ ಇಲಾಖೆಯಿಂದ ದಿನಾಂಕ ೨೫-೩-೮೯ರಂದು ಶೌಚಾಲಯ ಕಟ್ಟಲು ಸರ್ಕಾರದವರು ಆಜ್ಞೆ ಹೊರಡಿಸಿರುವರೆ ?

ಆ) ಈ ಕೆಲಸಕ್ಕೆ ಈಗ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ಮತ್ತು ಈ ಕೆಲಸವು ಯಾವ ಹಂತದಲ್ಲಿದೆ ?

ಶ್ರೀ ಎಂ. ವೀರಪ್ಪ ಮೊಯಿಲಿ(ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವಾ ಇಲಾಖೆ ಸಚಿವರು).

ಅ) ಹೌದು

ಆ) ಈವರೆವಿಗೂ ಕೆಲಸವನ್ನು ಪ್ರಾರಂಭಿಸಿಲ್ಲ.